# ಗ್ರಾಮಲೋಕ ವಿಭಿನ್ನ ಸಾಹಿತ್ಯ ಕಾರ್ಯಕ್ರಮ

**ವಿಕ ಸುದ್ದಿಲೋಕ** ಮಂಗಳೂರು

ಹೊಸದಿಲ್ಲಿ ಸಾಹಿತ್ಯ ಅಕಾಡೆಮಿ ಹಾಗೂ ಕೊಂಕಣಿ ಬರಹಗಾರ ಹಾಗೂ ಕಲಾವಿದರ ಒಕ್ಕೂಟ ಮಂಗಳೂರು ಆಶ್ರಯದಲ್ಲಿ ಬದಿಯಡ್ಕ ಪಂಚಾಯಿತಿನ ಬೇಳ ಗ್ರಾಮದಲ್ಲಿ ಗ್ರಾಮಲೋಕ ವಿಭಿನ್ನ ಸಾಹಿತ್ಯ ಕಾರ್ಯಕ್ರಮ ನಡೆಯಿತು.

ಯುವ ಬರಹಗಾರರು ಹಾಗೂ ನಾಟಕ, ಟಿವಿ ಧಾರಾವಾಹಿ ನಿರ್ದೇಶಕರಾದ ಸ್ಟ್ಯಾನಿ ಬೇಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಾಹಿತ್ಯ ಅಕಾಡೆಮಿ ಕೊಂಕಣಿ ವಿಭಾಗದ ಸಂಯೋಜಕರಾದ ಮೆಲ್ವಿನ್ ರೊಡ್ರಿಗಸ್ ಸಾಹಿತ್ಯ ಅಕಾಡೆಮಿಯ ಇತಿಹಾಸ ಹಾಗೂ ಕಾರ್ಯಕ್ರಮಗಳ ವಿವರಣೆ ನೀಡಿದರು. ಯುವಸಾಹಿತಿಗಳಾದ ರಾಜು ಉಕ್ಕಿನಡ್ಕ, ರವಿ ಕುಮಾರ್ ಕ್ರಾಸ್ತ, ಪರಿಸರ ಹೋರಾಟ ಗಾರರಾದ ರಾಜು ಕಿದೂರು ಹಾಗೂ ವಾಣಿ ಕ್ರಾಸ್ತ ಸ್ವರಚಿತ ಕವನಗಳನ್ನು ವಾಚಿಸುವುದರೊಂದಿಗೆ ಪರಿಸರ, ಭಾಷೆ ಹಾಗೂ ಸಂಸ್ಕೃತಿಯ ಕುರಿತು ತಮ್ಮ ವಿಚಾರಗಳನ್ನು ಮಂಡಿಸಿದರು. ಕವಿತಾ ಟ್ರಸ್ಟ್ ಸದಸ್ಯ ವಿನ್ಸೆಂಟ್ ಪಿಂಟೊ ವಂದಿಸಿದರು.




ಬದಿಯಡ್ಕ ಪಂಚಾಯಿತಿನ ಬೇಳ ಗ್ರಾಮದಲ್ಲಿ ಗ್ರಾಮಲೋಕ ಕಾರ್ಯಕ್ರಮ ನಡೆಯಿತು.